**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 840 (938) |
| ಸದಸ್ಯರ ಹೆಸರು | : | ಶ್ರೀ ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 24.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 4 ತಿಂಗಳಿಂದ ಸುಮಾರು 48,000 ಸಾವಿರ ಬುಡಕಟ್ಟು ಕುಟುಂಬಗಳಿಗೆ ಪೌಷ್ಠಿಕ ಆಹಾರ ಕಿಟ್ ವಿತರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ರಾಜ್ಯದ 08 ಜಿಲ್ಲೆಗಳಾದ ಮೈಸೂರು, ಚಾಮರಾಜನಗರ, ಕೊಡಗು, ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಅರಣ್ಯ ಹಾಗೂ ಅರಣ್ಯದ ಅಂಚಿನಲ್ಲಿ ವಾಸಿಸುತ್ತಿರುವ ಮೂಲನಿವಾಸಿ ಪಂಗಡಗಳಾದ ಕೊರಗ ಮತ್ತು ಜೇನು ಕುರುಬ ಹಾಗೂ ಇತರೆ ಪರಿಶಿಷ್ಟ ಪಂಗಡದವರಾದ ಕಾಡುಕುರುಬ, ಸೋಲಿಗ, ಎರವ, ಮಲೈಕುಡಿ, ಕುಡಿಯ, ಸಿದ್ದಿ, ಹಸಲರು, ಗೌಡಲು, ಗೊಂಡ ಮತ್ತು ಬೆಟ್ಟಕುರುಬ ಜನಾಂಗದ ಒಟ್ಟಾರೆ 50046 ಕುಟುಂಬಗಳಿಗೆ ಪೌಷ್ಠಿಕ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.<br>ಸರ್ಕಾರದ ಆದೇಶ ಸಂಖ್ಯೆ:STW/SECB/STP/439/2025, ದಿನಾಂಕ:04.02.2026 ಮತ್ತು ತಿದ್ದುಪಡಿ ಆದೇಶ ದಿನಾಂಕ:03.03.2026 ರಂತೆ 2026-27ನೇ ಸಾಲಿನಲ್ಲಿ ಪೌಷ್ಠಿಕ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ದಿನಾಂಕ:06.03.2026ರಂದು ಟೆಂಡರ್ ಕರೆದು ದಿನಾಂಕ:06.04.2026 ರಂದು ಬಿಡ್ ಸಲ್ಲಿಸಲು ಅಂತಿಮ ದಿನಾಂಕವನ್ನು ನಿಗಧಿಪಡಿಸಲಾಗಿತ್ತು. ಈ ನಡುವೆ ದಿನಾಂಕ:02.04.2026ರಂದು ಮಾನ್ಯ ಉಚ್ಚನ್ಯಾಯಾಲಯದಲ್ಲಿ WP No:10559/ 2026 ಪ್ರಕರಣ ದಾಖಲಾಗಿತ್ತು. ಮೇ-2026ರ ಮಾಹೆಯಲ್ಲಿ ನ್ಯಾಯಾಲಯದ ರಜಾ ಅವಧಿ ಮುಗಿದ ನಂತರ ದಿನಾಂಕ:17.06.2026 ರಂದು e-procurement Portal ನಲ್ಲಿ (2ನೇ ಕರೆ) ಟೆಂಡರ್ ಆಹ್ವಾನಿಸಲಾಗಿದೆ. ದಿನಾಂಕ:03.07.2026ಕ್ಕೆ ಬಿಡ್ ಸಲ್ಲಿಸಲು ಕೊನೆಯ ದಿನಾಂಕವನ್ನು ನಿಗಧಿಪಡಿಸಿ, ದಿನಾಂಕ:04.07.2026 ರಂದು ತಾಂತ್ರಿಕ ಬಿಡ್‌ನ್ನು ತೆರೆದು ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಟೆಂಡರ್ ಅನುಮೋದನೆಗಾಗಿ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪೌಷ್ಠಿಕ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ಶೀಘ್ರದಲ್ಲಿಯೇ ಕ್ರಮ ಕೈಗೊಳ್ಳಲಾಗುವುದು. |
| ಆ) | ಕಿಟ್ ವಿತರಣೆ ವಿಳಂಬದಿಂದಾಗಿ ಅನೇಕ ಕುಟುಂಬಗಳು ಜೀವನೋಪಾಯಕ್ಕಾಗಿ ಬೇರೆ ಜಿಲ್ಲೆಗಳಿಗೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿಲ್ಲವೆ? | ಅರಣ್ಯ ಹಾಗೂ ಅರಣ್ಯದ ಅಂಚಿನಲ್ಲಿ ವಾಸಿಸುತ್ತಿರುವ ಬುಡಕಟ್ಟು ಸಮುದಾಯದವರಿಗೆ ಪೌಷ್ಠಿಕ ಆಹಾರ ಪದಾರ್ಥಗಳನ್ನು PDS ಆಹಾರ ಪದಾರ್ಥಗಳ ಜೊತೆಗೆ ಹೆಚ್ಚುವರಿಯಾಗಿ ನೀಡಲಾಗುತ್ತಿದೆ. ಜೀವನೋಪಾಯಕ್ಕಾಗಿ ಬೇರೆ ಜಿಲ್ಲೆಗಳಿಗೆ ವಲಸೆ ಹೋಗುವ ಪ್ರಕರಣಗಳು ವರದಿಯಾಗಿರುವುದಿಲ್ಲ. |

STW/SECB/STC/221/2026

(ಟಿ. ಶ್ರೀನಿವಾಸಮೂರ್ತಿ)

ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು